ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 26/08/2019

# ಜೇಟ್ಲಿಗೆ ಭಾವಪೂರ್ಣ ವಿದಾಯ



1. ಬಿಜೆಪಿ ಕಚೇರಿಯಿಂದ ನಿಗಮ್‌ಬೋಧ್ ಘಾಟ್‌ಗೆ ಅರುಣ್ ಜೇಟ್ಲಿ ಪಾರ್ಥಿವ ಶರೀರದ ಮೆರವಣಿಗೆ.
2. ದುಃಖತಪ್ತ ಜೇಟ್ಲಿ ಪತ್ನಿ ಹಾಗೂ ಪುತ್ರಿಗೆ ಪುತ್ರ ರೋಹನ್‌ರಿಂದ ಸಾಂತ್ವನ.

- ದೆಹಲಿಯ ನಿಗಮ್‌ಬೋಧ್ ಘಾಟ್‌ನಲ್ಲಿ ಭಾನುವಾರ ಮಧ್ಯಾಹ್ನ ನಡೆದ ಅಂತ್ಯಸಂಸ್ಕಾರ
- ಜೇಟ್ಲಿ ಪುತ್ರ ರೋಹನ್ ಅವರಿಂದ ಅಂತಿಮ ವಿಧಿ ವಿಧಾನ
- ಉಪರಾಷ್ಟ್ರಪತಿ ನಾಯ್ಡು, ಕೇಂದ್ರ ಸಚಿವರು, ವಿವಿಧ ರಾಜ್ಯಗಳ ಸಿಎಂಗಳು ಭಾಗಿ
- ಅಂತ್ಯಸಂಸ್ಕಾರಕ್ಕೂ ಮೊದಲು ಸೇನಾ ವಾಹನದಲ್ಲಿ ಪಾರ್ಥಿವ ಶರೀರದ ಮೆರವಣಿಗೆ

**ನವದೆಹಲಿ:** ಶನಿವಾರ ನಿಧನರಾದ ಕೇಂದ್ರದ ಮಾಜಿ ಸಚಿವ ಅರುಣ್ ಜೇಟ್ಲಿ ಅವರ ಅಂತ್ಯಕ್ರಿಯೆ, ದೆಹಲಿಯ ಯಮುನಾ ನದಿ ತೀರದಲ್ಲಿರುವ ನಿಗಮ್‌ಬೋಧ್ ಘಾಟ್‌ನಲ್ಲಿ ಭಾನುವಾರ ಮಧ್ಯಾಹ್ನ 2:30ರ ಸುಮಾರಿಗೆ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು. ಜೇಟ್ಲಿ ಪುತ್ರ ರೋಹನ್ ಅವರು ಅಂತಿಮ ವಿಧಿಗಳನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ಡು, ಬಿಜೆಪಿ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ, ಬಿಜೆಪಿ ಅಧ್ಯಕ್ಷ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪಕ್ಷದ ಕಾರ್ಯಾಧ್ಯಕ್ಷ ಜೆ.ಪಿ. ನಡ್ಡಾ, ಸಚಿವರಾದ ನಿರ್ಮಲಾ ಸೀತಾರಾಮನ್, ಸ್ಮೃತಿ ಇರಾನಿ, ಅನುರಾಗ್ ಠಾಕೂರ್, ಕಾಂಗ್ರೆಸ್ ನಾಯಕರಾದ ಜ್ಯೋತಿರಾದಿತ್ಯ ಸಿಂಧಿಯಾ, ಕಪಿಲ್ ಸಿಬಲ್, ಕರ್ನಾಟಕ ಮುಖ್ಯಮಂತ್ರಿ ಯಡಿಯೂರಪ್ಪ, ಗುಜರಾತ್ ಸಿಎಂ ವಿಜಯ್ ರುಪಾಣಿ, ಬಿಹಾರ ಸಿಎಂ ನಿತೀಶ್ ಕುಮಾರ್ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ದರ್ಶನ:** ಭಾನುವಾರ ಬೆಳಗ್ಗೆ ಜೇಟ್ಲಿಯವರ ಪಾರ್ಥಿವ ಶರೀರವನ್ನು ಅವರ ನಿವಾಸದಿಂದ ದೆಹಲಿಯ ಬಿಜೆಪಿ ಕೇಂದ್ರ ಕಚೇರಿಗೆ ಸ್ಥಳಾಂತರಿಸಿ, ಅಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಹರ್ಷವರ್ಧನ್, ಜಾವಡೇಕರ್, ಪಿಯೂಶ್ ಗೋಯೆಲ್, ಆಪ್ ನಾಯಕ ಸಂಜಯ್ ಸಿಂಗ್, ಮಣಿಪುರ ರಾಜ್ಯಪಾಲರಾದ ನಜ್ಮಾ ಹೆಪ್ತುಲ್ಲಾ ಮತ್ತಿತರ ಗಣ್ಯರು ಹಾಗೂ ಜೇಟ್ಲಿಯವರ ಅಭಿಮಾನಿಗಳು ಅಂತಿಮ ನಮನ ಸಲ್ಲಿಸಿದರು.

**ಮೆರವಣಿಗೆ:** ಬಳಿಕ ಬಿಜೆಪಿ ಕಚೇರಿಯಿಂದ, ಪಾರ್ಥಿವ ಶರೀರವನ್ನು ಹೂಗಳಿಂದ ಅಲಂಕೃತಗೊಂಡಿದ್ದ ಸೇನೆಯ ವಾಹನದಲ್ಲಿ ಮೆರವಣಿಗೆಯ ಮೂಲಕ ನಿಗಮ್‌ಬೋಧ್ ಘಾಟ್‌ಗೆ ತರಲಾಯಿತು. ಮೆರವಣಿಗೆ ವೇಳೆ, ಅಭಿಮಾನಿಗಳು 'ಜೇಟ್ಲಿ ಅಮರ್ ರಹೇ' ಎಂಬ ಘೋಷಣೆ ಕೂಗುತ್ತಿದ್ದರು.

**ಶೋಕಾಚರಣೆ:** ಅಗಲಿದ ಅರುಣ್ ಜೇಟ್ಲಿ ಅವರ ಗೌರವ ಸೂಚಕವಾಗಿ ಪಂಜಾಬ್ ಸರ್ಕಾರ ಸೋಮವಾರ ಶೋಕಾಚರಣೆ ಘೋಷಿಸಿದೆ. ಹಿಮಾಚಲ ಪ್ರದೇಶ ಸರ್ಕಾರ ಕೂಡ 2 ದಿನಗಳ ಶೋಕಾಚರಣೆ ಕುರಿತು ಪ್ರಕಟಣೆ ಹೊರಡಿಸಿದ್ದು, ಸರ್ಕಾರಿ ಕಟ್ಟಡಗಳಲ್ಲಿ ತ್ರಿವರ್ಣ ಧ್ವಜವನ್ನು ಅರ್ಧ ಮಟ್ಟಕ್ಕೆ ಹಾರಿಸಲಾಗುವುದು ಎಂದು ಹೇಳಿದೆ.